ಪತ್ರಿಕಾ ಪ್ರಕಟಣೆ - PRESS RELEASE

ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ
RESERVE BANK OF INDIA

ಜಾಲತಾಣ : www.rbi.org.in
Website : www.rbi.org.in
ಇಮೇಲ್ /email : helpdoc@rbi.org.in

ಸಂವಹನ ಇಲಾಖೆ, ಕೇಂದ್ರ ಕಚೇರಿ, ಶಾಹಿದ್ ಭಗತ್ ಸಿಂಗ್ ಮಾರ್ಗ, ಫೋರ್ಟ್, ಮುಂಬೈ-400001 ಫೋನ್/ಫೋನ್: 022- 22660502

Department of Communication, Central Office, Shahid Bhagat Singh Marg, Fort, Mumbai-400001 फोन/Phone: 022- 22660502

26 ಡಿಸೆಂಬರ್ 2024

**ಪತ್ರಿಕಾ ಪ್ರಕಟಣೆ**

**ದಿ ಭಾರತ್ ಕೋಆಪರೇಟಿವ್ ಬ್ಯಾಂಕ್ ಲಿಮಿಟೆಡ್ ,ಬೆಂಗಳೂರು - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ**

ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ತನ್ನ ಡಿಸೆಂಬರ್ 18, 2024 ರ ಆದೇಶದ ಮೂಲಕ ಮೇಲ್ವಿಚಾರಣಾ ಕ್ರಿಯಾ ಚೌಕಟ್ಟು (SAF) ಅಡಿಯಲ್ಲಿ ನೀಡಿದ ನಿರ್ದಿಷ್ಟ ನಿರ್ದೇಶನಗಳ ಅನುಪಾಲನೆ ಮಾಡದೇ ಇದ್ದುದಕ್ಕಾಗಿ ದಿ ಭಾರತ್ ಕೋಆಪರೇಟಿವ್ ಬ್ಯಾಂಕ್ ಲಿಮಿಟೆಡ್, ಬೆಂಗಳೂರು - ಈ ಬ್ಯಾಂಕಿಗೆ (ಬ್ಯಾಂಕು) ರೂ. 3,00,000/- ( ರೂ. ಮೂರು ಲಕ್ಷ ಮಾತ್ರ ) ವಿತ್ತೀಯ ದಂಡ ವಿಧಿಸಿದೆ. ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಎ(1)(ಸಿ ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31,2023 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಯನ್ನು ಆಧರಿಸಿ ಬ್ಯಾಂಕಿನ ಶಾಸನ ಬದ್ಧ ನಿರೀಕ್ಷಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ ಮಾಡಲಾಯಿತು. ಮೇಲ್ವಿಚಾರಣಾ ಕ್ರಿಯಾ ಚೌಕಟ್ಟು (SAF) ಅಡಿಯಲ್ಲಿ ನೀಡಿದ ನಿರ್ದೇಶನಗಳ ಅನುಪಾಲನೆ ಆಗದೆ ಇರುವ ಬಗ್ಗೆ, ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಬ್ಯಾಂಕಿಗೆ ಈ ನಿರ್ದೇಶನಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ಧ ಮಾಡಲಾದ ಈ ಕೆಳಗಿನ ಆರೋಪ ಸ್ಥಿರಪಟ್ಟಿದೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿವೆ ಎಂದು ಗೊತ್ತಾಯಿತು:

ಬ್ಯಾಂಕು ಮೇಲ್ವಿಚಾರಣಾ ಕ್ರಿಯಾ ಚೌಕಟ್ಟು ಅಡಿಯಲ್ಲಿ ನೀಡಲಾದ ನಿರ್ದೇಶನಗಳ ಪಾಲನೆ ಮಾಡದೆ ಹೊಸ ಸಾಲ ಮತ್ತು ಮುಂಗಡಗಳನ್ನು ಮಂಜೂರು ಮಾಡಿತ್ತು. ಇವು -ಏ) ಒಂಟಿ ಸಾಲಗಾರರ ಅನಾವರಣ ಮಿತಿಗಿಂತ ಹೆಚ್ಚಾಗಿತ್ತು ; ಮತ್ತು ಬಿ ) ಸಾವಧಿ ಠೇವಣಿಗಳ/ರಾಷ್ಟ್ರೀಯ

ಉಳಿತಾಯ ಪತ್ರಗಳ/ ಕಿಸಾನ್ ವಿಕಾಸ್ ಪತ್ರಗಳ/ ವಿಮಾ ಪಾಲಿಸಿಗಳ ಪೂರಕ ಭದ್ರತೆ ಹೊಂದಿರಲಿಲ್ಲ.

ನಿಯಂತ್ರಣ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ. ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ.

**(ಪುನೀತ್ ಪಂಚೋಲಿ)**

**ಮುಖ್ಯ ಮಹಾ ವ್ಯವಸ್ಥಾಪಕರು**

**ಪತ್ರಿಕಾ ಪ್ರಕಟಣೆ: 2024-25/1788**